ಬೆಳಗಾವಿ ಜಿಲ್ಲೆಯ ಸದಲಗಾ ಕ್ಷೇತ್ರದಲ್ಲಿ ಖಾಯಂ ಆಗಿ ವೈದ್ಯಾಧಿಕಾರಿಗಳನ್ನು ಹಾಗೂ ಸಿಬ್ಬಂದಿಯನ್ನು ನಿಯಮಿಸದೇ ಇರುವುದು.

2545 - ಶ್ರೀ ಪ್ರಕಾಶ್ ಬಾ. ಹುಕ್ಕೇರಿ, (ಸದಲಗಾ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯ ಸದಲಗಾ ಕ್ಷೇತ್ರದ ಕೆಲವು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸರ್ಕಾರವು ಖಾಯಂ ಆಗಿ ವೈದ್ಯಾಧಿಕಾರಿಗಳನ್ನು ಮತ್ತು ಆಗತ್ಯವಿರುವ ಸಿಬ್ಬಂದಿಯನ್ನು ಸುಮಾರು ವರ್ಷಗಳಿಂದ ನಿಯಮಿಸದೇ ಇರುವುದರಿಂದ ಈ ಆಸ್ಪತ್ರೆಗಳನ್ನು ಮುಚ್ಚುವ ಸ್ಥಿತಿ ಬಂದಿರುವುದು ಈ ಬಗ್ಗೆ ಈ ವಿಷಯ ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಸದರಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು?

ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಬೆಳಗಾಂ ಜಿಲ್ಲೆಯ ಸದಲಗಾ ಮತ ಕ್ಷೇತ್ರದಲ್ಲಿ 6 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮಂಜೂರಾಗಿವೆ. ಒಟ್ಟು 100ವಿವಿಧ ದರ್ಜೆಯ ಹುದ್ದೆಗಳು ಮಂಜೂರಾಗಿದ್ದು, 63 ಹಾಲಿ ಕೆಲಸ ನಿರ್ವಹಿಸುತ್ತಿದ್ದಾರೆ. 37 ವಿವಿಧ ದರ್ಜೆಯ ಹುದ್ದೆಗಳು ಖಾಲಿ ಇರುತ್ತದೆ.

ಆ) ಸದರಿ ಖಾಲಿ ಇರುವ ಹುದ್ದೆಗಳನ್ನು ತುಂಬಲು ಜರೂರಾಗಿ ಕ್ರಮಕೈಗೊಳ್ಳಲಾಗುತ್ತಿದೆ.

ಸದಲಗಾ ಮತ ಕ್ಷೇತ್ರದ ಕುಡಿಯುವ ನೀರಿನ ಯೋಜನೆಗಳು.

2523 - ಶ್ರೀ ಪ್ರಕಾಶ್ ಬಿ. ಹುಕ್ಕೇರಿ (ಸದಲಗಾ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸದಲಗಾ ಮತಕ್ಷೇತ್ರಕ್ಕೆ ಮಂಜೂರಾದ ಕೆಲವು ಗ್ರಾಮಗಳ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗಳಿಗೆ ಗುತ್ತಿಗೆ ದಾರರು ಟೆಂಡರ್ ಹಾಕದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಯೋಜನೆಗಳನ್ನು ಪೂರ್ಣಗೊಳಿಸಲು ಬೇಕಾಗುವ ಕಾಲಾವಕಾಶವೆಷ್ಟು?

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):

ಅ) ಸದಲಗಾ ಮತಕ್ಷೇತ್ರದ ಗ್ರಾಮಗಳಲ್ಲಿ ಮಂಜೂರಾದ ನಲ್ಲಿ ನೀರು ಸರಬರಾಜು ಯೋಜನೆಗಳಿಗೆ ಟೆಂಡರ್ ಕರೆದಾಗ, ಬೇಡಕೀಹಾಳ ಹಾಗೂ ಶಮನೇವಾಡಿ ಸಂಯುಕ್ತ ನೀರು ಸರಬರಾಜು ಯೋಜನೆಯ ಕಾಮಗಾರಿಗೆ ಮಾತ್ರ ಗುತ್ತಿಗೆದಾರರು ಗುತ್ತಿಗೆಯನ್ನು ಸ್ವೀಕರಿಸಲು ಮುಂದೆ ಬಂದಿಲ್ಲ.

ಆ) ಜೇಡಿಕೀಹಾಳ ಹಾಗೂ ಶಮನೇವಾಡಿ ಸಂಯುಕ್ತ ನೀರು ಸರಬರಾಜು ಯೋಜನೆಗಳ ಕಾಮಗಾರಿಯನ್ನು ಗರಿಷ್ಠ ಮೂರು ವರ್ಷಗಳಲ್ಲಿ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.

ವಿಶ್ವ ಬ್ಯಾಂಕಿನ ನೆರವಿನಿಂದ ಕೈಗೊಳ್ಳಲಾದ ಕಾಮಗಾರಿಗಳು.

2522 - ಪ್ರಕಾಶ್ ಬಾ. ಹುಕ್ಕೇರಿ (ಸದಲಗಾ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?